# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 812 |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಪಿ.ಹೆಚ್. ಪೂಜಾರ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 10.03.2026 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳ ಬಹಳ ಭಾಗ ಮುಳುಗಡೆಯಾಗಿ ಲಕ್ಷಾಂತರ ಜನರು ಮನೆ-ಜಮೀನುಗಳನ್ನು ಕಳೆದುಕೊಂಡು, ತಾವು ಮಾಡುತ್ತಿದ್ದ ಉದ್ಯೋಗಗಳನ್ನು ಕೂಡಾ ಕಳೆದುಕೊಂಡು ನಿರಾಶ್ರಿತರಾಗಿದ್ದು, ಸದರಿ ನಿರಾಶ್ರಿತರಿಗೆ ಉದ್ಯೋಗ ನೀಡುವ ದಿಶೆಯಲ್ಲಿ ಸರ್ಕಾರ ಸಣ್ಣ-ದೊಡ್ಡ ಉದ್ಯಮಗಳನ್ನು, ಕಾರ್ಖಾನೆಗಳನ್ನು ಸ್ಥಾಪಿಸುವ ಕಾರ್ಯಕ್ರಮಗಳನ್ನು ರೂಪಿಸಿದೆಯೇ; ರೂಪಿಸಿದ್ದರೆ, ಅವುಗಳ ಬಗ್ಗೆ ಮಾಹಿತಿ ನೀಡುವುದು; | ರಾಜ್ಯದಲ್ಲಿ ಹೊಸ ಕೈಗಾರಿಕೆಗಳ ಸ್ಥಾಪನೆಗಾಗಿ ಬಂಡವಾಳ ಹೂಡಿಕೆ ಆಕರ್ಷಿಸಲು ಸರ್ಕಾರವು ಕಾಲಕಾಲಕ್ಕೆ ಕೈಗಾರಿಕಾ ನೀತಿಗಳನ್ನು ಜಾರಿಗೆ ತರುತ್ತಿದೆ.<br><br>ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳನ್ನೊಳಗೊಂಡಂತೆ ರಾಜ್ಯದಲ್ಲಿ ಬಂಡವಾಳವನ್ನು ಆಕರ್ಷಿಸಲು ಈ ಕೆಳಕಂಡ ಆದ್ಯತಾ / ಪ್ರೋತ್ಸಾಹಕ ಕ್ರಮಗಳನ್ನು ಕೈಗೊಳ್ಳಲಾಗಿದೆ:<br><br>➢ 2025-30 ಕೈಗಾರಿಕಾ ನೀತಿಯು ರಾಜ್ಯದ ಸಮಗ್ರ ಅಭಿವೃದ್ಧಿ ಗುರಿಯೊಂದಿಗೆ ಬೆಂಗಳೂರಿನಿಂದ ಹೊರಗಡೆ ಕೈಗಾರಿಕೆಯಲ್ಲಿ ಹಿಂದುಳಿದ ಪ್ರದೇಶವನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ.<br><br>➢ ಕೈಗಾರಿಕೆಯಲ್ಲಿ ಹಿಂದುಳಿದ ತಾಲ್ಲೂಕುಗಳಲ್ಲಿ ಹೂಡಿಕೆಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಈ ನೀತಿಯಲ್ಲಿ 3 ವಲಯಗಳಾಗಿ ರಾಜ್ಯದ ಜಿಲ್ಲೆಗಳನ್ನು ವರ್ಗೀಕರಿಸಿದೆ. ಕೈಗಾರಿಕೆಯಲ್ಲಿ ಹಿಂದುಳಿದ ತಾಲ್ಲೂಕುಗಳು / ಜಿಲ್ಲೆಗಳನ್ನು ವಲಯ-1 ಮತ್ತು ವಲಯ-2 ರಲ್ಲಿ ಹಾಗೂ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳನ್ನು ವಲಯ-3 ರಲ್ಲಿ ವರ್ಗೀಕರಿಸಲಾಗಿದೆ.<br><br>➢ ರಾಜ್ಯದ ಸಮತೋಲನ ಕೈಗಾರಿಕಾ ಅಭಿವೃದ್ಧಿಯನ್ನು ಖಚಿತಪಡಿಸಿಕೊಳ್ಳಲು ಕೈಗಾರಿಕೆಯಲ್ಲಿ ಹಿಂದುಳಿದ ಜಿಲ್ಲೆಗಳು / ತಾಲ್ಲೂಕುಗಳಲ್ಲಿ ಹೂಡಿಕೆಗಳನ್ನು ಆಕರ್ಷಿಸಲು ಹೆಚ್ಚಿನ ಪ್ರೋತ್ಸಾಹವನ್ನು ನೀಡಲಾಗುತ್ತಿದೆ.<br><br>➢ ದೇಶ ವಿದೇಶಗಳ ಹಲವಾರು ಪ್ರತಿಷ್ಠಿತ ಕಂಪನಿಗಳೊಂದಿಗೆ ಕರ್ನಾಟಕದಲ್ಲಿ ಬಂಡವಾಳ ಹೂಡಲು ಸಭೆಗಳನ್ನು ನಡೆಸಲಾಗುತ್ತಿದೆ. |
| ಆ | ಅವಳಿ ಜಿಲ್ಲೆಯಲ್ಲಿ ಅಪಾರ ಪ್ರಮಾಣದ ಲೈಮ್ ಸ್ಟೋನ್, ಡೋಲೋಮೈಟ್ ಇತ್ಯಾದಿ ಖನಿಜಗಳ ನಿಕ್ಷೇಪವಿದ್ದು, ರಾಜ್ಯದಲ್ಲಿಯೇ ತೋಟಗಾರಿಕೆ ಉತ್ಪನ್ನ ಬೆಳೆಯುವಂತಹ ವಿಪುಲವಾದ ಪ್ರದೇಶವಿದ್ದು, ಅಲ್ಲದೇ ನೇಕಾರಿಕೆ ಅವಲಂಬಿತ ದೊಡ್ಡ ಸಂಖ್ಯೆಯ ಕುಟುಂಬಗಳಿದ್ದು, ಅವಳಿ ಜಿಲ್ಲೆಗಳಲ್ಲಿ ಪೂರಕ ಕೈಗಾರಿಕೆಗಳನ್ನು ಪ್ರಾರಂಭಿಸುವ ನಿಟ್ಟಿನಲ್ಲಿ ಸರ್ಕಾರವು ಹೂಡಿಕೆ ಆಕರ್ಷಿಸುವ ಕಾರ್ಯಕ್ರಮಗಳನ್ನು ರೂಪಿಸಿದೆಯೇ; (ಮಾಹಿತಿ ನೀಡುವುದು) | |
| ಇ | ರೂಪಿಸಿದ್ದರೆ, ಯಾವ ಯಾವ ಕ್ಷೇತ್ರಗಳಲ್ಲಿ ಫಲ ದೊರೆಯಲಿದೆ? (ಮಾಹಿತಿ ನೀಡುವುದು) | |

| | | |
|---|---|---|
| | | ➢ ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಭೂಮಿ ಖರೀದಿ ಪ್ರಕ್ರಿಯೆ ಸರಳೀಕರಣಗೊಳಿಸಲಾಗಿದೆ.<br><br>➢ ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಕೆಲವು ಮುಖ್ಯ ಎನ್‌ಒ.ಸಿ / ಒಪ್ಪಿಗೆಗಳನ್ನು ಸ್ವಯಂ ಘೋಷಣ ಪತ್ರದ ಆಧಾರದ ಮೇಲೆ ಪಡೆಯಲು 03 ವರ್ಷಗಳವರೆಗೆ ಅವಧಿ ವಿಸ್ತರಿಸಿ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ಅಧಿನಿಯಮ 2002 ಕ್ಕೆ ತಿದ್ದುಪಡಿ ತರಲಾಗಿದೆ.<br><br>➢ ರಾಜ್ಯದಲ್ಲಿ ಉನ್ನತೀಕರಿಸಿದ ಏಕಗವಾಕ್ಷಿ ಪೋರ್ಟಲ್ ಅಭಿವೃದ್ಧಿಪಡಿಸಿದ್ದು ವಿವಿಧ ಇಲಾಖೆಗಳ ಸೇವೆಗಳನ್ನು ಪಡೆಯಲು ಪೋರ್ಟಲ್ ನಲ್ಲಿ ಅವಕಾಶ ಕಲ್ಪಿಸಿದೆ. ಸದರಿ ಪೋರ್ಟಲ್ ನಲ್ಲಿ ಹಂಚಿಕೆದಾರರಿಗೆ ಅವಶ್ಯಕವಿರುವ ಮಂಜೂರಾತಿಗಳು / ಅನುಮತಿಗಳು / ಕೈಗಾರಿಕಾ ನೀತಿಗಳನ್ವಯ ಇರುವ ಮಾಹಿತಿಗಳು ಮತ್ತು ಇತರೆ ಅಗತ್ಯ ಮಾಹಿತಿಗಳು ಲಭ್ಯವಿದೆ.<br><br>➢ ಅಲ್ಲದೆ, ಕರ್ನಾಟಕ ಕ್ಲೀನ್ ಮೊಬಿಲಿಟಿ ಪಾಲಿಸಿ 2025-30 ಹಾಗೂ ಕರ್ನಾಟಕ ಏರೋಸ್ಪೇಸ್ & ಡಿಫೆನ್ಸ್ ಪಾಲಿಸಿ 2022-27 ನ್ನು ಸಹ ಹೊರತಂದಿದ್ದು, ಈ ನೀತಿಗಳಡಿ ವಲಯವಾರು ಕೈಗಾರಿಕೆಗಳಿಗೆ ಆಕರ್ಷಕ ರಿಯಾಯಿತಿ ಹಾಗೂ ಉತ್ತೇಜಕಗಳನ್ನು ಒದಗಿಸಲಾಗುತ್ತಿದೆ.<br><br>2013-14 ರಿಂದ ಈವರೆಗೆ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಒಟ್ಟು 142 ಯೋಜನಗಳಿಗೆ ಅನುಮೋದನೆ ನೀಡಲಾಗಿದೆ.<br><br>ವಿಜಯಪುರ ಜಿಲ್ಲೆಯಲ್ಲಿ ಒಟ್ಟು 90 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ.10,131 ಕೋಟಿ ಮೊತ್ತದ ಬಂಡವಾಳ ಹೂಡಿಕೆ ಮತ್ತು 16716 ಉದ್ಯೋಗಾವಕಾಶಗಳನ್ನು ನಿರೀಕ್ಷಿಸಲಾಗಿದೆ. ಇವುಗಳ ಪೈಕಿ 8 ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳಿಂದ ರೂ. 806.66 ಕೋಟಿ ಮೊತ್ತದ ಬಂಡವಾಳ ಹೂಡಿಕೆಯಾಗಿದೆ ಹಾಗೂ 1593 ಸಂಖ್ಯೆಯ ಉದ್ಯೋಗ ಸೃಜನೆಯಾಗಿದೆ. 3 ಯೋಜನೆಗಳು ಅನುಷ್ಠಾನದಿಂದ ಹಿಂದೆ ಸರಿದಿದ್ದು, ಉಳಿದ ಯೋಜನೆಗಳು ವಿವಿಧ ಅನುಷ್ಠಾನ ಹಂತಗಳಲ್ಲಿವೆ.<br><br>ಇದೇ ರೀತಿ ಬಾಗಲಕೋಟೆ ಜಿಲ್ಲೆಯಲ್ಲಿ ಒಟ್ಟು 52 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ.11,370 ಕೋಟಿ ಮೊತ್ತದ ಬಂಡವಾಳ ಹೂಡಿಕೆ ಮತ್ತು 11805 ಉದ್ಯೋಗಾವಕಾಶಗಳನ್ನು |

| | | |
|---|---|---|
| | | ನಿರೀಕ್ಷಿಸಲಾಗಿದೆ. ಇವುಗಳ ಪೈಕಿ 17 ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳಿಂದ ರೂ. 6497.89 ಕೋಟಿ ಮೊತ್ತದ ಬಂಡವಾಳ ಹೂಡಿಕೆಯಾಗಿದೆ ಹಾಗೂ 4806 ಸಂಖ್ಯೆಯ ಉದ್ಯೋಗ ಸೃಜನೆಯಾಗಿದೆ. ಉಳಿದ 35 ಯೋಜನೆಗಳು ವಿವಿಧ ಅನುಷ್ಠಾನ ಹಂತಗಳಲ್ಲಿವೆ.<br><br>ಅವಳಿ ಜಿಲ್ಲೆಗಳಲ್ಲಿ ಸಿಮೆಂಟ್, ಸಕ್ಕರೆ, ಜವಳಿ, ಆಹಾರ ಸಂಸ್ಕರಣಾ, ಇಂಜಿನಿಯರಿಂಗ್ & ವೇರ್ ಹೌಸಿಂಗ್ ಕ್ಷೇತ್ರಗಳಲ್ಲಿ ಬಂಡವಾಳ ಹೂಡಿಕೆಯಾಗಲಿದೆ.<br><br>ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗೆ ದೊಡ್ಡ ಉದ್ಯಮಗಳನ್ನು ಆಕರ್ಷಿಸಲು ದೇಶ ಹಾಗೂ ವಿದೇಶಗಳಲ್ಲಿ ಸಭೆಗಳನ್ನು ನಡೆಸಿದಾಗ, ಜಿಲ್ಲೆಗಳಲ್ಲಿ ಲಭ್ಯವಿರುವ ಅವಕಾಶಗಳ ಬಗ್ಗೆ ಕೈಗಾರಿಕೋದ್ಯಮಿಗಳಿಗೆ ವಿವರಿಸಲಾಗುತ್ತಿದೆ.<br><br>ಕೈಗಾರಿ ನೀತಿ – 2025-30 ರಡಿ ಈ ಎರಡೂ ಜಿಲ್ಲೆಗಳ ತಾಲ್ಲೂಕುಗಳನ್ನು ಅತೀ ಹಿಂದುಳಿದ ತಾಲ್ಲೂಕುಗಳೆಂದು ವರ್ಗೀಕರಿಸಿ, ಹೆಚ್ಚಿನ ರಿಯಾಯಿತಿ ಹಾಗೂ ಪ್ರೋತ್ಸಾಹಗಳನ್ನು ಒದಗಿಸಲಾಗುತ್ತಿದೆ. |

**ಸಿಐ 37 ಎಸ್‌ಪಿಐ 2026**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು